**<u>ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾ. ದಂಡಾಧಿಕಾರಿಗಳ ನ್ಯಾಯಾಲಯ, ಗೋಕಾಕ</u>**

**<u>ಸಿ.ಸಿ. ನಂ.2016/2023</u>**

| | |
|---|---|
| **ಪಿರ್ಯಾದುದಾರರುಃ** | ಶ್ರೀ ಮುನ್ನಾ ಮೌಲಾಲಿ ಮುಜಾವರ,<br>26 ವರ್ಷ, ವೃತಿಃ ಖಾಸಗಿ ಕೆಲಸ,<br>ಸಾಃಗೋಕಾಕ, ತಾಃ ಗೋಕಾಕ ಜಿ.ಬೆಳಗಾವಿ, |

**- ವಿರುದ್ಧ -**

| | |
|---|---|
| **ಆರೋಪಿ** | ಶ್ರೀಮತಿ ನಾಹಿದಾ ಕೋಂ ರಿಯಾಜ ಮಕಾಂದರ,<br>50 ವರ್ಷ, ವೃತಿಃ ವ್ಯಾಪಾರ,<br>ಸಾಃ ಹಳಬಾಗ ಗಲ್ಲಿ, ಗೋಕಾಕ ತಾಃ ಗೋಕಾಕ,<br>ಜಿ.ಬೆಳಗಾವಿ |

**<u>ಆಪಾದನೆ</u>**

**ಶ್ರೀ ರಾಜೀವ ಗೋಳಸಾರ, ಬಿ.ಎ., ಎಲ್.ಎಲ್.ಎಂ., ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ. ದಂಡಾಧಿಕಾರಿ, ಗೋಕಾಕ,** ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆಪಾದನೆ ಮಾಡುತ್ತಿದ್ದೇನೆಃ

ಪಿರ್ಯಾದಿದಾರರು ಮತ್ತು ಆರೋಪಿಯಾದ ನೀವು ಸ್ನೇಹಿತರಾಗಿರುತ್ತೀರಿ, ಹೀಗಿರುವಾಗ ಆರೋಪಿಯಾದ ನೀವು ನಿಮ್ಮ ಮಗಳಿಗೆ ಆರಾಮ ಇಲ್ಲದ ಕಾರಣಕ್ಕಾಗಿ ಪಿರ್ಯಾದುದಾರರಿಗೆ ರೂ.1,50,000/-ಗಳ ಕೈಗಡ ಸಾಲ ಕೇಳಿದ್ದು, ಅದಕ್ಕೆ ಪಿರ್ಯಾದುದಾರರು ದಿನಾಂಕ 13-02-2022 ರಂದು ರೂ.1,50,000/-ಗಳನ್ನು ಆರೋಪಿಯಾದ ನಿಮಗೆ ನೀಡಿರುತ್ತಾರೆ. ಹೀಗಿರುವಾಗ ಆರೋಪಿಯಾದ ನೀವು ಸದರಿ ಸಾಲದ ಹಣವನ್ನು 02 ತಿಂಗಳೊಳಗಾಗಿ ಮರಳಿ ಕೊಡುತ್ತೇನೆಂದು ತಿಳಿಸಿರುತ್ತಿರಿ.

02 ತಿಂಗಳು ಮುಗಿದಾದ ನಂತರ ಪಿರ್ಯಾದುದಾರರು ಆರೋಪಿಯಾದ ನಿಮಗೆ ಸದರಿ ಸಾಲದ ಹಣವನ್ನು ಮರು ಪಾವತಿ ಮಾಡುವಂತೆ ಕೇಳಿದಾಗ, ಆರೋಪಿಯಾದ ನೀವು ಒಂದಿಲ್ಲಾ ಒಂದು ಕಾರಣಗಳನ್ನು ಹೇಳುತ್ತಾ ಮುಂದೂಡುತ್ತಾ ಬಂದಿರುತ್ತೀರಿ ಕೊನೆಗೆ ನೀವು ದಿಃ 12-04-2023 ರಂದು ನಿಮ್ಮ ಖಾತೆಯಾದ ಐ ಡಿ ಎಫ್ ಸಿ ಬ್ಯಾಂಕ್ ಗೋಕಾಕ ಶಾಖೆ ಇಲ್ಲಿಗೆ ಸೇರಿದ ಚೆಕ್ ನಂ.067332 ನೇದ್ದನ್ನು ರೂ.1,50,000/-ಎಂದು ನಮೂದು ಮಾಡಿ ಪಿರ್ಯಾದುದಾರರಿಗೆ ನೀಡಿರುತ್ತಿರಿ.

ಆರೋಪಿಯಾದ ನೀವು ನೀಡಿದ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಖಾತೆಯಿರುವ ಕರ್ನಾಟಕ ಬ್ಯಾಂಕ್ ಲಿ, ಗೋಕಾಕ ಶಾಖೆ ಇಲ್ಲಿಗೆ ನಗದೀಕರಣಕ್ಕಾಗಿ ದಿನಾಂಕ 12-04-2023 ರಂದು ಹಾಜರುಪಡಿಸಿದಾಗ Inactive ಎಂಬ ಹಿಂಬರಹ ಹಾಗೂ ಮೆಮೋದೊಂದಿಗೆ ದಿನಾಂಕ 15-04-2023 ರಂದು ಸದರಿ ಚೆಕ್ ಅಮಾನ್ಯಗೊಂಡಿರುತ್ತದೆ.

ನಂತರ ಪಿರ್ಯಾದುದಾರರು ಆರೋಪಿಯಾದ ನೀವು ನೀಡಿದ ಚೆಕ್ಕು ಅಮಾನ್ಯಗೊಂಡ ಬಗ್ಗೆ ತಮ್ಮ ವಕೀಲರ ಮುಖಾಂತರ ದಿನಾಂಕ 12-04-2023 ರಂದು ತಿಳುವಳಿಕೆ ಪತ್ರವನ್ನು ಆರೋಪಿಯಾದ ನಿಮಗೆ ನೋಂದಾಯಿತ ಅಂಚೆ ಮೂಲಕ ಕಳುಹಿಸಿದ್ದು, ಸದರಿ ನೋಟಿಸು ದಿನಾಂಕ 01-05-2023 ರಂದು ಜಾರಿಯಾಗದೆ ಮರಳಿ ಬಂದಿರುತ್ತದೆ, ಹೀಗಿರುವಾಗ ಆರೋಪಿಯಾದ ನೀವು ನಿಗದಿತ ಸಮಯದಲ್ಲಿ ಚೆಕ್ಕಿನ ಹಣವನ್ನು ಮರುಸಂದಾಯ ಮಾಡದೆ ಇರುವ ಕಾರಣ ನೀವು ವರ್ಗಾವಣೀಯ ಲಿಖಿತಗಳ ಅಧಿನಿಯಮದ ಕಲಂ.138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಆಪಾದಿಸಲಾಗಿರುತ್ತದೆ.

## ಆರೋಪಿಯ ಹೇಳಿಕೆ

ಪ್ರಶ್ನೆ ನಂ.1. ಈಗ ಓದಿ ಹೇಳಿದ ಆಪಾದನೆಯನ್ನು ಕೇಳಿಸಿಕೊಂಡಿರಾ ? ತಿಳಿಯಿತೇ ?

ಉತ್ತರಃ

ಪ್ರಶ್ನೆ ನಂ.2. ಸದರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆಯಾಗಬೇಕಾ ?

ಉತ್ತರಃ

ಮೇಲಿನ ಆಪಾದನೆಯನ್ನು ಆರೋಪಿಗೆ ಕನ್ನಡ ಭಾಷೆಯಲ್ಲಿ ಓದಿ ಹೇಳಿ, ಆರೋಪಿಯು ಕೊಟ್ಟ ಉತ್ತರವು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನೊಳಗೊಂಡಿದೆ ಎಂದು ಈ ದಿನ ಅಂದರೆ ದಿನಾಂಕ **13-03-2024** ರಂದು ತೆರೆದ ನ್ಯಾಯಾಲಯದಲ್ಲಿ ದೃಡೀಕರಿಸುತ್ತೇನೆ.

**(ರಾಜೀವ ಗೋಳಸಾರ)**
**ಪ್ರಧಾನ ಪ್ರ.ದ.ನ್ಯಾ. ದಂ, ಗೋಕಾಕ.**